ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಭೂಮಿ ಕಳೆದುಕೊಂಡ ರೈತರಿಗೆ ನೇರವಾಗಿ ಪರಿಹಾರ ನೀಡುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ) -

655 (856) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ವಾಣಿಜ್ಯ ಮತ್ತು ಕೈಗಾರಿಕಾ ಇಲಾಖಾ ವ್ಯಾಪ್ತಿಯಲ್ಲಿ ಬರುವ ಪ್ರಾಧಿಕಾರ/ಮಂಡಳಿ/ನಿಗಮಗಳು ಸಾರ್ವಜನಿಕ ಉದ್ದೇಶಕ್ಕೆ ರೈತರ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡಾಗ ಇದರ ಹಣವು ನೇರವಾಗಿ ರೈತರಿಗೆ ತಲುಪದೇ ಮಧ್ಯವರ್ತಿಗಳಿಗೆ ತಲುಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇತ್ತೀಚಿನ ದಿನಪತ್ರಿಕೆಯ ಮುಖಪುಟದಲ್ಲಿ ಪ್ರಕಟಿಸಿರುವಂತೆ ಭೂಮಿ ಕಳೆದುಕೊಂಡ ರೈತರಿಗೆ ಪರಿಹಾರ ಸರಿಯಾಗಿ ಸಿಕ್ಕಿಲ್ಲವೆಂಬ ಅಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಸಂಬಂಧಪಟ್ಟ ರೈತರಿಗೆ ನೇರವಾಗಿ ಪರಿಹಾರ ದೊರಕುವಂತಾಗಲು ಯಾವ ಕ್ರಮಗಳನ್ನು ಕೈಗೊಂಡಿದೆ; (ವಿವರವಾದ ಮಾಹಿತಿ ನೀಡುವುದು)

(ಈ) ವಾಣಿಜ್ಯ ಮತ್ತು ಕೈಗಾರಿಕಾ ಇಲಾಖಾ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಪ್ರಾಧಿಕಾರ/ಮಂಡಳಿ/ನಿಗಮಗಳು ಯಾವ ಯಾವ ಅಧಿನಿಯಮದನ್ವಯ ಯಾವ ಕಲಂನಡಿ ರೈತರ ಜಮೀನನ್ನು ಭೂ ಸ್ವಾಧೀನಪಡಿಸಿಕೊಳ್ಳಲು ಅಧಿಕಾರ ಹೊಂದಿವೆ; (ವಿವರವಾದ ಮಾಹಿತಿ ನೀಡುವುದು)

(ಉ) ಭೂ ಸ್ವಾಧೀನಗೊಂಡ ಭೂಮಿಯನ್ನು ಡಿ ನೋಟಿಫೈ ಮಾಡಲು ಹಾಲಿ ಇರುವ ಮಾರ್ಗಸೂಚಿಗಳೇನು; ಯಾವ ಜಮೀನುಗಳನ್ನು ಡಿ ನೋಟಿಫೈ ಮಾಡಬಹುದಾಗಿದೆ? (ವಿವರವಾದ ಮಾಹಿತಿ ನೀಡುವುದು)